ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 08.12.2023

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 09-12-2023 ರಿಂದ 13-12-2023 ವರೆಗೆ)

| ನಿಯತಾಂಕಗಳು | 09.12.2023 | 10.12.2023 | 11.12.2023 | 12.12.2023 | 13.12.2023 |
|---|---|---|---|---|---|
| ಮಳೆ (ಮಿ ಮಿ) | 15 | 9 | 1 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 31 | 29 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 19 | 19 | 17 | 17 |
| ಮೋಡ (ಪ್ರಮಾಣ) | 5 | 5 | 6 | 6 | 5 |
| ಅರ್ದ್ರತೆ 7.20 ಬೆ (ಶೇ) | 95 | 93 | 94 | 94 | 94 |
| ಅರ್ದ್ರತೆ 2.20 ಮ (ಶೇ) | 63 | 65 | 59 | 54 | 46 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 13 | 13 | 12 | 11 | 12 |
| ಗಾಳಿಯ ದಿಕ್ಕು (ಡಿಗ್ರಿ) | 111 | 90 | 90 | 90 | 77 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 29.0-31.0$^{o}$ C ಮತ್ತು ಕನಿಷ್ಠ 17.0-20.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **93-94** % ಇದ್ದು ಮಧ್ಯಾಹ್ನ **46-65** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 11-13 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ | | ➢ ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಬಿಸಿಲಿನಲ್ಲಿ ಒಣಗಿಸುವುದನ್ನು ಕೆಲ ದಿನಗಳ ಕಾಲ ಮುಂದೂಡಿ.<br>➢ ಗೊಬ್ಬರದ ಗಿಡಗಳನ್ನು ಮತ್ತು ಕಳೆಗಿಡಗಳನ್ನು ಭೂ ಹೊದಿಕೆಯಾಗಿ ಬೆಳೆಗಳಿಕೆ ಹಾಕಿ ಇದರಿಂದ ಗೊಬ್ಬರ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br>➢ ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು.<br>➢ ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ಮುಂಗಾರು ಬೆಳೆಗಳು | ಕಟಾವು ಹಂತ | **ಈ ಕೆಳಗಿನ ಕಡಿಮೆ ಅವಧಿ ಹಿಂಗಾರು ಬೆಳೆ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1,<br>➢ ರಾಗಿ ತೆನೆಯನ್ನು ಕಟಾವು ಮಾಡಿ ಬಿಸಿಲು ಬಂದ ಮೇಲೆ ಒಣಗಿಸಿ ಶೇಖರಿಸಿ.<br>➢ ಹಗುರ ಮಳೆಯ ಅವಕಾಶ ಇರುವುದರಿಂದ ರಾಗಿ ಗಿಡವನ್ನು ಕಟಾವು ಮಾಡುವುದನ್ನು ಕೆಲ ದಿನಗಳ ಕಾಲ ಮುಂದೂಡಿ.<br>➢ ತೊಗರಿ ಬೆಳೆಯಲ್ಲಿ ಚೆನ್ನಾಗಿ ಬಲಿತಿರುವ ಕಾಯಿಯನ್ನು ಕಟವು ಮಾಡಿ ಬಿಸಿಲು ಬಂದ ಮೇಲೆ ಒಣಗಿಸಿ ಶೇಖರಿಸಿ. |

| | | |
|---|---|---|
| ಮಾವು | ಹೂವಿನ ಕುಡಿ ಚಿಗುರುವ ಮತ್ತು ಹೂವಿನ ಹಂತ | 1. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಫ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ)<br>2. ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>3. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝ್ಹಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.<br>4. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು.<br>5. ಅದರ ಜೊತೆಗೆ ಮರಗಳಲ್ಲಿ ಕಣ್ಣಾಡಿಸಿ ಪರಾವಲಂಬಿ ಸಸ್ಯಗಳಾದ ಬದನಿಕೆ (ಕಸ್ಕ್ಯುಟ, ಲೊರಾಂಥಸ್) ಮುಂತಾದುವುಗಳನ್ನು ಸವರಿತೆಗೆಯಬೇಕು.ಅಧಿಕ ಸಾಂದ್ರತೆ ನೆಡುವಕೆಯಲ್ಲಿಕಾಂಡ ಪರಾವಲಂಬಿ ಸಸ್ಯಗಳ ಹಾವಳಿ ಜಾಸ್ತಿಯಿರುತ್ತದೆ.<br>6. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು. |
| **ಪಶುಸಂಗೋಪನೆ** | | 1. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>2. ಪ್ರಾಣಿಗಳ ಶೆಡ್‌ಗಳಲ್ಲಿನ ನೆಲ ಹಾಸು/ಹುಲ್ಲನ್ನು ಪ್ರತಿದಿನ ಬದಲಾಯಿಸಬೇಕು.<br>3. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕೆ** | | 1. ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>2. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>3. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಬ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>4. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.